# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಕನಕಪುರ

## ಸಿಸಿ ನಂ.301/2008

| | | | |
|---|---|---|---|
| ಚಾಸಾ | **5** | ಪ್ರಾಸಾ | **4** |
| ಹೆಸರು | | ಜಿ ಎಸ್ ಮಲ್ಲಯ್ಯ | |
| ತಂದೆಯ ಹೆಸರು | | ಲೇಟ್ ಸೂರಪ್ಪ | |
| ವಯಸ್ಸು | | **55**ವರ್ಷಗಳು | |
| ಉದ್ಯೋಗ | | ವ್ಯವಸಾಯ | |
| ವಿಳಾಸ | | ಹಳೆಗಬ್ಬಾಡಿ ಗ್ರಾಮ | |

ದಿನಾಂಕ**.01.04.2026**ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯವಿಚಾರಣೆ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ನನಗೆ ಈ ಪ್ರಕರಣದ ಆರೋಪಿ ಗೊತ್ತಿಲ್ಲ. ಚಾಸಾ-**4** ರವರು ನನಗೆ ಗೊತ್ತು. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ನೋಡಿ ಗುರುತಿಸಿರುತ್ತಾರೆ, ಸಾಕ್ಷಿಯು ಗುರುತಿಸಿದ ದಾಖಲೆಯು ಸ್ಥಳ ಮತ್ತು ಅಮಾನತ್ತು

ಪಂಚನಾಮೆಯಾಗಿದ್ದು, ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

ನಿಪಿ-1ಕ್ಕೆ ನಾನು ಯಾವಾಗ ಸಹಿ ಮಾಡಿರುತ್ತೇನೆ ಎನ್ನುವುದು ನನಗೆ ಗೊತ್ತಿಲ್ಲ. ನಿಪಿ-1ಕ್ಕೆ ಪೊಲೀಸರು ಯಾವ ವಿಚಾರಕ್ಕೆ ಸಂಬಂಧಿಸಿದಂತೆ ನನ್ನ ಸಹಿ ಪಡೆದಿರುತ್ತಾರೆ ಎನ್ನುವುದು ನನಗೆ ಗೊತ್ತಿಲ್ಲ. ನಿಪಿ-1ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಿಪಿ-1ಕ್ಕೆ ಆ ದಿನ ನನ್ನೊಂದಿಗೆ ಮತ್ತಾರು ಸಹಿ ಮಾಡಿರುತ್ತಾರೆ ಎನ್ನುವುದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ಮಹಜರ್ ಮಾಡಿಲ್ಲ ಮತ್ತು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪೋಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ದವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಸರ್ಕಾರಿ ಅಭಿಯೋಜಕರವರು ಅನುಮತಿ ಕೋರಿದ್ದು, ಅನುಮತಿಯನ್ನು ನೀಡಲಾಯಿತು.

ಪಾಟೀ ಸವಾಲು ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-

ದಿನಾಂಕ.23.09.2001ರಂದು ಸಂಜೆ 6.30 ರಿಂದ 7.00 ಗಂಟೆ ಸುಮಾರಿಗೆ ಚಾಸಾ-1 ರವರು ನನ್ನ, ಚಾಸಾ-4 ರವರ ಸಮಕ್ಷಮ ಪೊಲೀಸರು ಆರೋಪಿಯ ವಶದಲ್ಲಿದ್ದ 40ಲೀಟರ್ ಬಿಳಿ ಬಣ್ಣದ ಪ್ಲಾಸ್ಟಿಕ್ ಕ್ಯಾನಿನಲ್ಲಿದ್ದ ಸೇಂದಿಯನ್ನು ಅಮಾನತ್ತುಪಡಿಸಿಕೊಂಡು ಅದಕ್ಕೆ ಸಂಬಂಧಿಸಿದಂತೆ ಒಂದು ಪಂಚನಾಮೆಯನ್ನು ತಯಾರಿಸಿ ಅದರ ವಿಚಾರ ನನಗೆ ಓದಿ ಹೇಳಿ ಸ್ಥಳದಲ್ಲಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರಕ್ಕೆ ಸಂಬಂಧಿಸಿದಂತೆ ನಾನು ಪೋಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸದರಿ ಹೇಳಿಕೆ ಭಾಗವನ್ನು ನಿಪಿ-4 ಎಂದು ಗುರುತಿಸಲಾಯಿತು.

ಆರೋಪಿ ನಮ್ಮ ಊರಿನವರು ಎಂದರೆ ಸರಿಯಲ್ಲ. ಆರೋಪಿ ನನಗೆ ಪರಿಚಯ ಎಂದರೆ ಸರಿಯಲ್ಲ. ಆರೋಪಿತ ನನಗೆ ಪರಿಚಯಸ್ಥರಾದ ಕಾರಣ, ಅವರಿಗೆ ಸಹಾಯವಾಗಲೀ ಎಂದು ನಿಪಿ-1 ಮತ್ತು ನಿಪಿ-4 ರಲ್ಲಿರುವ ಸಂಗತಿಗಳು ನನಗೆ ಗೊತ್ತಿದ್ದರೂ, ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ-

ಆರೋಪಿ ಪರ ವಕೀಲರು ತಮ್ಮ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆಃ- ಇಲ್ಲ

**CC No.301/2008**
**CW-5 PW-4**

**(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಢೀಕರಿಸುತ್ತೇನೆ.)**

**ಓ ಹೇ ಕೇ ಸರಿ ಇದೆ,**

**(ರಾಧ.ಎಸ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕನಕಪುರ.**